ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಅಭಯಾರಣ್ಯಗಳಲ್ಲಿ ಬೆಂಕಿ ಕಾಣಿಸಿಕೊಂಡಾಗ ಸರ್ಕಾರ ಕೈಗೊಳ್ಳುವ ಕ್ರಮಗಳ ಕುರಿತು

ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು) -

90 (24) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದೆರಡು ವರ್ಷಗಳಿಂದ ಕರ್ನಾಟಕದ ಪ್ರಸಿದ್ಧ ಅಭಯಾರಣ್ಯಗಳು ಹಾಗೂ ಹುಲಿ ಸಂರಕ್ಷಿತ ಅರಣ್ಯಗಳೂ ಆದ ಬಂಡೀಪುರ, ನಾಗರಹೊಳೆ ಹಾಗೂ ಗೋಪಾಲಸ್ವಾಮಿ ಬೆಟ್ಟದಲ್ಲಿ ಬೇಸಿಗೆಯಲ್ಲಿ ಬೆಂಕಿ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ ಈ ಬಾರಿ ಬೆಂಕಿ ನಿಯಂತ್ರಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಮಾಹಿತಿ ನೀಡುವುದು)

(ಆ) ಪಶ್ಚಿಮಘಟ್ಟಗಳು ಹಾದು ಹೋಗುವ ಅರಣ್ಯ, ಕಪ್ಪತಗುಡ್ಡ ಸೇರಿದಂತೆ ಕರ್ನಾಟಕದ ವಿವಿಧ ಅರಣ್ಯ ಪ್ರದೇಶಗಳಲ್ಲಿ ಪ್ರತಿ ವರ್ಷ ಬೆಂಕಿ ಕಾಣಿಸಿಕೊಳ್ಳುತ್ತಿದ್ದು, ಇವುಗಳ ನಿಯಂತ್ರಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಕಾಡಿನ ಬೆಂಕಿ ನಿಯಂತ್ರಿಸಲು ಸಿಬ್ಬಂದಿಗಳಿಗೆ ಸೂಕ್ತ ತರಬೇತಿ ನೀಡಲಾಗಿದೆಯೇ; ಅರಣ್ಯ ಇಲಾಖೆಯಲ್ಲಿ ಇನ್ನೂ ಭರ್ತಿಯಾಗಬೇಕಿರುವ ಫಾರೆಸ್ಟ್ ಗಾರ್ಡ್, ವಾಚರ್ಸ್ ಹುದ್ದೆಗಳ ನೇಮಕಾತಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ?